# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 673
ಸದಸ್ಯರ ಹೆಸರು : ಶ್ರೀ ಪ್ರಕಾಶ್ ಕೆ. ರಾಥೋಡ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 21.02.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಸಾರಿಗೆ ಇಲಾಖೆಯ ನಾಲ್ಕು ವಿಭಾಗಗಳಲ್ಲಿ ಬರುವ ವಾಹನಗಳನ್ನು ಶೇಕಡಾ ಎಷ್ಟು ಪ್ರಮಾಣದಲ್ಲಿ ವಿದ್ಯುದೀಕರಣ ವಾಹನಗಳಾಗಿ ಬದಲಾಯಿಸಲಾಗಿದೆ: (ವಿಭಾಗವಾರು ವಿವರ ನೀಡುವುದು) | ರಾಜ್ಯದ ನಾಲ್ಕು ರಸ್ತೆ ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಲ್ಲಿ ಯಾವುದೇ ವಾಹನಗಳನ್ನು ವಿದ್ಯುದೀಕರಣ ವಾಹನಗಳಾಗಿ ಬದಲಾಯಿಸಿರುವುದಿಲ್ಲ ಹಾಗೂ ಬದಲಾಯಿಸುವ ಪ್ರಸ್ತಾವನೆ ಇರುವುದಿಲ್ಲ.<br><br>ಆದರೆ, ಸಾರಿಗೆ ಸಂಸ್ಥೆಗಳಲ್ಲಿ ಈ ಕೆಳಕಂಡಂತೆ ವಿದ್ಯುತ್ ವಾಹನಗಳನ್ನು ಜಿ.ಸಿ.ಸಿ ಆಧಾರದ ಮೇಲೆ ಕಾರ್ಯಾಚರಣೆಗೊಳಿಸಲು ಯೋಜಿಸಲಾಗಿದೆ. |
| ಆ. | ನಾಲ್ಕು ವಿಭಾಗಗಳಲ್ಲಿನ ಸಂಪೂರ್ಣವಾಗಿ ವಿದ್ಯುದೀಕರಣವಾಗಿ ಬದಲಾಯಿಸಲು ಎಷ್ಟು ವರ್ಷಗಳ ಕಾಲಾವಧಿಗಳನ್ನು ನಿಗದಿಪಡಿಸಲಾಗಿದೆ; | **<u>ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ</u>**<br><br>ನಿಗಮದಲ್ಲಿ 50 ವಿದ್ಯುತ್ ಚಾಲಿತ ವಾಹನಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ಹೆಚ್ಚಿನ ವಿದ್ಯುತ್ ವಾಹನಗಳನ್ನು ಕಾರ್ಯಾಚರಣೆಗೊಳಿಸಲು ಯೋಜಿಸಲಾಗಿದೆ. |
| ಇ. | ನಾಲ್ಕು ವಿಭಾಗಗಳಲ್ಲಿನ ವಾಹನಗಳನ್ನು ಸಂಪೂರ್ಣವಾಗಿ ವಿದ್ಯುದೀಕರಣ ವಾಹನಗಳನ್ನಾಗಿಸಲು ಎಷ್ಟು ಅನುದಾನದ ಅವಶ್ಯಕತೆ ಇದೆ? | **<u>ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ</u>**<br><br>ಸಂಸ್ಥೆಯಲ್ಲಿ ಪ್ರಸ್ತುತ 504 ವಿದ್ಯುತ್ ಚಾಲಿತ ಬಸ್ಸುಗಳನ್ನು ಕಾರ್ಯಾಚರಣೆ ಮಾಡಲಾಗುತ್ತಿದೆ ಹಾಗೂ ಸದ್ಯದಲ್ಲಿಯೇ 1311 ವಿದ್ಯುತ್ ಚಾಲಿತ ಬಸ್ಸುಗಳನ್ನು ಕಾರ್ಯಾಚರಣೆ ಮಾಡಲು ಯೋಜಿಸಲಾಗಿದೆ.<br><br>ಅಲ್ಲದೇ, ಸರ್ಕಾರದ ಸಹಾಯಧನದಲ್ಲಿ 320 ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್ಸುಗಳನ್ನು ಜಿಸಿಸಿ ಮಾದರಿಯಲ್ಲಿ ಆಚರಣೆ ಮಾಡಲು, ನಗರ ಭೂಸಾರಿಗೆ ನಿರ್ದೇಶನಾಲಯ(DULT) ಹಾಗೂ National Clean Air Programme (NCAP) ಯೋಜನೆಯಡಿ ನೀಡಲಾಗುತ್ತಿರುವ ಸಹಾಯಧನದ ಅಡಿಯಲ್ಲಿ 120 ಹವಾನಿಯಂತ್ರಣ ರಹಿತ ಮಿಡಿ ಎಲೆಕ್ಟ್ರಿಕ್ ಬಸ್ಸುಗಳು, 10 ಡಬಲ್ ಡೆಕ್ಕರ್ ಹವಾನಿಯಂತ್ರಿತ ಎಲೆಕ್ಟ್ರಿಕ್ ಬಸ್ಸುಗಳನ್ನು ಕಾರ್ಯಾಚರಣೆಗೊಳಿಸಲು ಟೆಂಡರ್ ಆಹ್ವಾನಿಸುವ ಪ್ರಕ್ರಿಯೆಯು ಚಾಲ್ತಿಯಲ್ಲಿರುತ್ತದೆ. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | **<u>ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ</u>**<br><br>ಸಂಸ್ಥೆಯಲ್ಲಿ 450 ವಿವಿಧ ಮಾದರಿಯ ಎಲೆಕ್ಟ್ರಿಕ್ ವಾಹನಗಳನ್ನು ಕಾರ್ಯಾಚರಣೆಗೊಳಿಸಲು ಟೆಂಡರ್ ಆಹ್ವಾನಿಸುವ ಪ್ರಕ್ರಿಯೆ ಜಾರಿಯಲ್ಲಿದೆ. |

ಸಂಖ್ಯೆ: ಟಿಡಿ 51 ಟಿಸಿಕ್ಯೂ 2024

**(ರಾಮಲಿಂಗಾರೆಡ್ಡಿ)**
ಸಾರಿಗೆ ಮತ್ತು ಮುಜರಾಯಿ ಸಚಿವರು